ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-181/ಪಿ.ಆರ್/ /2021-22 ದಿನಾಂಕ : 03-07-2021

## ವಾರ್ಡ್ ಸಮಿತಿ (WDC) ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ವಾರ್ಡ್‌ನ ದಿನಾಂಕ :03-07-2021 ರಂದು ನಡೆದ ಸಭೆಯ ನಡಾವಳಿಗಳು

ವಿಷಯ:- ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ ವಾರ್ಡ್ DETER ಸಮಿತಿ (WDC)ಸಭೆಯ ನಡಾವಳಿ.

ಉಲ್ಲೇಖ:-1. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ :ಸಂ RD 158 TNR 2020 ದಿನಾಂಕ :07-05-2021

******

ಉಲ್ಲೇಖ (1) ರ ಸಭಾ ಸೂಚನಾ ಪತ್ರದ ಅನುಸಾರ ಆದೇಶದ ಅಂಶಗಳನ್ನು ಪಾಲಿಸಲು ವಾರ್ಡ್ ಸಮಿತಿ ಸಭೆ ನಿಗದಿಪಡಿಸಿ ದಿನಾಂಕ :03-07-2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.00 ಗಂಟೆಗೆ ಶ್ರೀ ನಾಗರಾಜ್ ಬಿರಾದಾರ್ ನೋಡಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಾಚಲಪತಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡಾವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಶ್ರೀ ನಾಗರಾಜ್ ಬಿರಾದಾರ್ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ-181 ರಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ಮಟ್ಟದಲ್ಲಿ ಕೋವಿಡ್-19 ಅನ್ನು ನಿಯಂತ್ರಿಸಲು ಸರ್ಕಾರದ ಆದೇಶದಂತೆ DETER ಸಮಿತಿ (WDC) ರಚಿಸಲಾಗಿದ್ದು, ವಾರ್ಡ್ ಮಟ್ಟದಲ್ಲಿ ಕೋವಿಡ್ ನಿಯಂತ್ರಿಸಲು ವಾರ್ಡ್ ಕೋವಿಡ್ ಸ್ವಯಂ ಸೇವಕನ್ನಾಗಿ ನೇಮಿಸಿಕೊಳ್ಳಲು ಸೂಚಿಸಿರುತ್ತಾರೆ

ಹಿಂದಿನ ವಾರ್ಡ್ ಸಭೆಯ ನಡಾವಳಿಗಳನ್ನು ಚರ್ಚಿಸಲಾಗಿರುತ್ತದೆ

1) ಚುನಾವಣೆಯ ಗುರುತಿನ ಚೀಟಿಯನ್ನು ನೀಡುವ ಬಗ್ಗೆ ಚರ್ಚಿಸಲಾಗಿದ್ದು, ಅಗತ್ಯವಿರುವ ಫಾರಂಗಳನ್ನು ಸಾರ್ವಜನಿಕರಿಗೆ ನೀಡಲು ನೋಡೆಲ್ ಅಧಿಕಾರಿಗಳು ಕಂದಾಯ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ.
2) ಮಳೆಗಾಲ ಪ್ರಾರಂಭವಾಗಿರುವುದರಿಂದ ರಸ್ತೆಯಲ್ಲಿ ನೀರು ನಿಲ್ಲದ ಹಾಗೆ ಮತ್ತು ಗುಂಡಿಗಳು ಕಂಡುಬಂದಲ್ಲಿ ತುರ್ತಾಗಿ ಕ್ರಮ ಜರುಗಿಸಲು ನೋಡೆಲ್ ಅಧಿಕಾರಿಗಳು ಸೂಚಿಸಲಾಗಿರುತ್ತಾರೆ.

... ಅವರ ವಿವರಣೆ ಬಗ್ಗೆ ಚರ್ಚಿಸಲಾಗಿದ್ದು, ಲಿಖಿತವಾ ವಿವರಣೆಯ ಗುತ್ತಿಗೆದಾರರ ಬಗ್ಗೆ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿರುತ್ತಾರೆ ಮತ್ತು ಟೈಮರ್ ಅಳವಡಿಸುವ ಬಗ್ಗೆ ನೋಡಲ್ ಅಧಿಕಾರಿಗಳು ವಿದ್ಯುತ್ ಇಲಾಖೆ ಅಧಿಕಾರಿಗಳ ಜೊತೆಯಲ್ಲಿ ದೂರವಾಣಿ ಮೂಲಕ ಚರ್ಚಿಸಿ ಮುಂದಿನ ಸಭೆಗೆ ತಪ್ಪದೇ ಹಾಜರಾಗಲು ಸೂಚಿಸಿರುತ್ತಾರೆ.

4) ಆರೋಗ್ಯ ಅಧಿಕಾರಿಗಳೊಂದಿಗೆ ವಾಕ್ಸಿನ್ ಬಗ್ಗೆ ಚರ್ಚಿಸುತ್ತಾ, ವಾರ್ಡ್‌ನಲ್ಲಿ ಇರುವ ಎಲ್ಲಾ ಹಿರಿಯ ನಾಗರಿಕರಿಗೆ ಮತ್ತು 2 ನೇ ಹಂತದ ವಾಕ್ಸಿನ್ ಅನ್ನು ಕಡ್ಡಾಯವಾಗಿ ಹಾಕಲು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

5) ವಾರ್ಡ್‌ನಲ್ಲಿ ಇರುವ ಕಾಲೇಜುಗಳಲ್ಲಿ ವಾಕ್ಸಿನ್ ಅನ್ನು ಹಾಕುವ ಬಗ್ಗೆ ಚರ್ಚಿಸಲಾಗಿರುತ್ತದೆ.

6) ವಾರ್ಡ್‌ನಲ್ಲಿ ವಾಕ್ಸಿನ್ ಸರಿಯಾಗಿ ಸರಬರಾಜು ಆಗದೇ ಇರುವ ಬಗ್ಗೆ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿ, ಇದನ್ನು ಸರಿಪಡಿಸುವಂತೆ ವೈದ್ಯಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

7) ವಾರ್ಡ್‌ನಲ್ಲಿ ಇರುವ ಉದ್ಯಾನವನಗಳ ನಿರ್ವಹಣೆ ಬಗ್ಗೆ ಮತ್ತು ಕಾವಲುಗಾರರನ್ನು ನಿಯೋಜಿಸುವ ಬಗ್ಗೆ ಸಭೆಯಲ್ಲಿ ಕಾರ್ಯಪಾಲಕ ಅಭಿಯಂತರರ ಕಛೇರಿಯ ಯೋಜನೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಂಡಿಸದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.